ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,
# ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ:ಸಿ4(7)ಪ್ರೌ.ಶಿ. ವರ್ಗ-29/2017-18 ದಿನಾಂಕ: 10/10/2018

:ಜ್ಞಾಪನ:

ವಿಷಯ:- 2017-18 ನೇ ಸಾಲಿನ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ ಪರಿಷ್ಕೃತ ವೇಳಾಪಟ್ಟಿ- ಹೆಚ್ಚುವರಿ ಶಿಕ್ಷಕರ ಮರು ನಿಯುಕ್ತಿ ಕ್ರಮಗಳು, ಕಡ್ಡಾಯ ವರ್ಗಾವಣೆ ಹಾಗೂ ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗಳ ಕುರಿತಂತೆ ಸಮಗ್ರ ಪರಿಷ್ಕೃತ ವೇಳಾಪಟ್ಟಿ.

ಉಲ್ಲೇಖ:- 1) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2017 (ಸರ್ಕಾರದ ಅಧಿಸೂಚನೆ : ಸಂವ್ಯಶಾಇ 22 ಶಾಸನ 2017 ದಿನಾಂಕ 18/04/2017)

2) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2017 (ಸರ್ಕಾರದ ಅಧಿಸೂಚನೆ ಇಡಿ 12 ಇಟಿಆರ್ 2017 ದಿನಾಂಕ 29/11/2017)

3) ಪ್ರಾಥಮಿಕ ಹಾಗು ಪ್ರೌಢಶಾಲಾ ಶಿಕ್ಷಕರ ವರ್ಗಾವಣಾ ವೇಳಾಪಟ್ಟಿ ಜ್ಞಾಪನ ಸಂಖ್ಯೆ: ಸಿ3(7) ಪ್ರಾ.ಶಾ.ಶಿ ವರ್ಗ-07/2017-18 ದಿನಾಂಕ: 29/12/2017, 06/01/2018, 19/01/2018, 09/02/2018, 24/02/2018, 13/03/2018

4) ಈ ಕಛೇರಿ ಪತ್ರ ಸಂಖ್ಯೆ ಸಿ4 (7) ಪ್ರೌಶಿವರ್ಗ 29 2017-18 ದಿನಾಂಕ 01/01/2018, 06/01/2018, 19/01/2018, 25/01/2018, 13/03/2018, 06/08/2018, 15/08/2018, ಮತ್ತು 25/08/2018, 18.09.2018 ಇತರೆ ಸಂಬಂಧಿತ.

5) ಅಪರ ಮುಖ್ಯ ಚುನಾವಣಾಧಿಕಾರಿ-1 ಸಿ.ಆ.ಸು.ಇ (ಚುನಾವಣೆಗಳು) ಮುಖ್ಯ ಚುನಾವಣಾಧಿಕಾರಿಗಳ ಕಛೇರಿ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-01. ಇವರ ಪತ್ರ ಸಂಖ್ಯೆ: ಸಿಆಸುಇ.44 ಮಾನಿಸ (ಅಮುಚಅ-1) 2018 ದಿನಾಂಕ: 10.10.2018.

-----****---

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ (3) ಮತ್ತು (4)ರ ಜ್ಞಾಪನಗಳಲ್ಲಿ ಪ್ರಾಥಮಿಕ ಹಾಗು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಗೆ ಮಾರ್ಗಸೂಚಿ ಸಹಿತ ವೇಳಾಪಟ್ಟಿಯನ್ನು ಹೊರಡಿಸಲಾಗಿತ್ತು. ಈಗಾಗಲೇ ದಿನಾಂಕ.18.09.2018 ರಲ್ಲಿ ಹೊರಡಿಸಲಾಗಿದ್ದ ಪರಿಷ್ಕೃತ ವೇಳಾಪಟ್ಟಿಗನುಸಾರವಾಗಿ ಹೆಚ್ಚುವರಿ ಪ್ರಕರಣಗಳನ್ನು ಒಳಗೊಂಡಂತೆ ವರ್ಗಾವಣಾ ಪ್ರಕ್ರಿಯೆಗಳನ್ನು ಹಮ್ಮಿಕೊಳ್ಳಲಾಗಿತ್ತು. ಹೆಚ್ಚುವರಿ ಶಿಕ್ಷಕರ ಪಟ್ಟಿ ಕುರಿತಂತೆ ಹಲವು ಆಕ್ಷೇಪಣೆಗಳು ವ್ಯಕ್ತಗೊಂಡ ನಂತರ ಸನ್ಮಾನ್ಯ ಸಚಿವರು ವರ್ಗಾವಣೆಗಳನ್ನು ತಾತ್ಕಾಲಿಕವಾಗಿ ಮುಂದೂಡಲು ಆದೇಶಿಸಿದಂತೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ದಿನಾಂಕ.27.09.2018 ರಂದು ನಡೆಯಬೇಕಾಗಿದ್ದ ಹೆಚ್ಚುವರಿ ಶಿಕ್ಷಕರ ಕೌನ್ಸಿಲಿಂಗ್ ಪ್ರಕ್ರಿಯೆ ಇದೇ ಕಾರಣದಿಂದ ನಡೆದಿರವುದಿಲ್ಲ. ಇದೇ ಕುರಿತಂತೆ ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಹೆಚ್ಚುವರಿ ಶಿಕ್ಷಕರ ಪಟ್ಟಿ ಕುರಿತು ಶಿಕ್ಷಕರಿಗೆ ಸ್ವೀಕೃತವಾಗುವ ಆಕ್ಷೇಪಣೆಗಳ ಬಗ್ಗೆ ಸೂಕ್ತವಾಗಿ ಪರಿಶೀಲಿಸಿ ಇತ್ಯರ್ಥಪಡಿಸಲು ಕ್ಷೇತ್ರಶಿಕ್ಷಣಾಧಿಕಾರಿಗಳು ಕಟ್ಟುನಿಟ್ಟಾದ ಸೂಚನೆಗಳನ್ನು ಹೊರಡಿಸಿರುತ್ತಾರೆ. ಮುಂದುವರೆದು ಹೆಚ್ಚುವರಿ ಶಿಕ್ಷಕರ ಪಟ್ಟಿಗಳ ಕುರಿತಾದ ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಿರುವ ಕುರಿತು ಮಾನ್ಯ ಸಚಿವರು ಖುದ್ದು ಅಂತಹ ಕ್ರಮದ ಬಗ್ಗೆ ಪರಿಶೀಲಿಸುವುದಾಗಿ ಸೂಚನಾ ಟಿಪ್ಪಣಿ ನೀಡಿರುತ್ತಾರೆ.

ಉಲ್ಲೇಖ (5) ರ ಅಪರ ಮುಖ್ಯ ಚುನಾವಣಾಧಿಕಾರಿ-1 ಸಿ.ಆ.ಸು.ಇ (ಚುನಾವಣೆಗಳು) ಪತ್ರದಲ್ಲಿ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಉಪಚುನಾವಣೆಗಳು ನಡೆಯುತ್ತಿರುವ 8 ಜಿಲ್ಲೆಗಳಾದ ಬಳ್ಳಾರಿ, ಮಂಡ್ಯ, ಶಿವಮೊಗ್ಗ, ಬಾಗಲಕೋಟೆ, ರಾಮನಗರ, ಮೈಸೂರು, ಉಡುಪಿ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಸಂಬಂಧಿಸಿದ ಜಿಲ್ಲೆಗಳಲ್ಲಿ ಹೆಚ್ಚುವರಿ ಮತ್ತು ವರ್ಗಾವಣೆ ಕೌನ್ಸಿಲಿಂಗ್ ನಡೆಸಲು ಅನುಮತಿ ನೀಡಿ, ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೂ ವರ್ಗಾಯಿತ ಶಿಕ್ಷಕರ ಬಿಡುಗಡೆ ಮತ್ತು ಹಾಜರಾತಿ ಕ್ರಮಗಳನ್ನು ಕೈಗೊಳ್ಳತಕ್ಕದ್ದಲ್ಲ. ಚುನಾವಣಾ ಪ್ರಕ್ರಿಯೆ ಮುಗಿದ ನಂತರ ಸಂಬಂಧಿಸಿದ ಶಿಕ್ಷಕರುಗಳಿಗೆ ಚಾಲನಾ ಆದೇಶ ಮತ್ತು ಶಾಲಾ ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ಕ್ರಮವಹಿಸಲು ಸೂಚಿಸಲಾಗಿದೆ. ಈ ಹಿನ್ನಲೆಯಲ್ಲಿ ಉಲ್ಲೇಖಿತ 8 ಜಿಲ್ಲೆಗಳಲ್ಲಿ ಹೆಚ್ಚುವರಿ, ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಚುನಾವಣಾ ನೀತಿ ಸಂಹಿತೆಯು ಉಲ್ಲಂಘನೆಯಾಗದಂತೆ ನಡೆಸಿ, ಚಾಲನಾದೇಶಗಳನ್ನು ಚುನಾವಣಾ ಪ್ರಕ್ರಿಯೆ ಮುಗಿದ ನಂತರ ನೀಡಲು ತಿಳಿಸಿದೆ.

ಈ ಹಿನ್ನಲೆಯಲ್ಲಿ ದಿನಾಂಕ.27.09.2018 ರಿಂದ ಈ ವರೆಗೂ ವರ್ಗಾವಣೆಗಳಿಗೆ ಸಂಬಂಧಪಟ್ಟಂತ ಹೆಚ್ಚುವರಿ ಶಿಕ್ಷಕರ ಪಟ್ಟಿ, ಕಡ್ಡಾಯ ವರ್ಗಾವಣೆ ಶಿಕ್ಷಕರ ಪಟ್ಟಿ ಹಾಗೂ ಕೋರಿಕೆ ವರ್ಗಾವಣೆಗಳ ಬಗ್ಗೆ ಶಿಕ್ಷಕರಿಗೆ other ವರ್ಗೀಕರಣದಲ್ಲಿ ಆಕ್ಷೇಪಣೆಗಳನ್ನು ದಾಖಲಿಸಲು ಅವಕಾಶವಿರಲಿಲ್ಲ. ಪ್ರಧಾನ ಕಾರ್ಯದರ್ಶಿಗಳ ಸೂಚನೆ ಮೇರೆಗೆ ಮುಕ್ತವಾಗಿ ಆಕ್ಷೇಪಣೆಗಳನ್ನು other ವರ್ಗೀಕರಣದಲ್ಲಿ ಸಲ್ಲಿಸಲು ಆನ್-ಲೈನ್ ನಲ್ಲಿ ಅವಕಾಶವನ್ನು ಕಲ್ಪಿಸಲಾಗಿದೆ. ಅದರಂತೆ ಪರಿಶೀಲಿಸಿ ಕೆಳಗಿನಂತೆ ಹೆಚ್ಚುವರಿ ಸೇರಿದಂತೆ ಅನುಕ್ರಮವಾಗಿ ದಿನಾಂಕಗಳನ್ನು ನಿಗಧಿಪಡಿಸಿ ಪರಿಷ್ಕೃತ ಸಮಗ್ರ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ಉಳಿದಂತೆ, ಉಲ್ಲೇಖಿತ ಜ್ಞಾಪನಗಳಲ್ಲಿನ ಎಲ್ಲಾ ಸೂಚನೆಗಳು/ ಮಾರ್ಗಸೂಚಿಗಳು ಯಥಾವತ್ತಾಗಿ ಮುಂದುವರೆಯುತ್ತವೆ.

**2018-19 ನೇ ಸಾಲಿನ ಹೆಚ್ಚುವರಿ ಶಿಕ್ಷಕರ ಮರು ನಿಯುಕ್ತಿ ಕ್ರಮಗಳ ವೇಳಾಪಟ್ಟಿ :**

| ಕ್ರಮ ಸಂಖ್ಯೆ | ವಿವರ | ದಿನಾಂಕಗಳು | ಕ್ರಮವಹಿಸುವ ಅಧಿಕಾರಿಗಳು |
|---|---|---|---|
| 1 | ಟಿಡಿಎಸ್ ನಲ್ಲಿ ಹಾಗೂ ವರ್ಗಾವಣಾ ತಂತ್ರಾಂಶದಲ್ಲಿ ಶಾಲೆಗಳ ವಲಯದ ವಿವರಗಳನ್ನು ಇಂದೀಕರಿಸುವುದು | ಪ್ರಕ್ರಿಯೆ ಪೂರ್ಣಗೊಂಡಿದೆ. | |
| 2 | ಆಕ್ಷೇಪಣೆಗಳ ಹಿನ್ನೆಲೆಯಲ್ಲಿ ಎಲ್ಲಾ ಆಕ್ಷೇಪಣೆಗಳನ್ನು ಟಿ.ಡಿ.ಎಸ್.ನಲ್ಲಿ ಶಿಕ್ಷಕರ ವಿವರಗಳನ್ನು ಇಂದೀಕರಿಸಲು/ಪರಿಶೀಲಿಸಲು ಅವಕಾಶ ಕಲ್ಪಿಸಲಾಗಿದೆ. | 15/10/2018 | 1.ಉಪನಿರ್ದೇಶಕರು(ಆಡಳಿತ)<br>2.ಕ್ಷೇತ್ರಶಿಕ್ಷಣಾಧಿಕಾರಿಗಳು<br>3.ಡಿ.ಡಿ.ಪಿ ಗಳು |
| 3 | ಹೆಚ್ಚುವರಿ ಶಿಕ್ಷಕರ ತಾತ್ಕಾಲಿಕ ಪಟ್ಟಿಗೆ ಶಿಕ್ಷಕರುಗಳು ಸೂಕ್ತ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗಧಿಪಡಿಸಿದ ಅವಧಿ | 22/10/2018 ರಿಂದ 26/10/2018 | ಸಂಬಂಧಪಟ್ಟ ಶಿಕ್ಷಕರು |
| 4 | ಶಿಕ್ಷಕರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಶಿಕ್ಷಕರ ಸೇವಾ ದಾಖಲೆಗಳೊಂದಿಗೆ ಪರಿಶೀಲಿಸಿ, ಆಕ್ಷೇಪಣೆಯನ್ನು ಪುರಸ್ಕರಿಸುವ ಅಥವಾ ತಿರಸ್ಕರಿಸುವುದು (ಆನ್-ಲೈನ್ ನಲ್ಲಿ) | 27/10/2018 ರಿಂದ 29/10/2018 | ಕ್ಷೇತ್ರಶಿಕ್ಷಣಾಧಿಕಾರಿಗಳು |
| 5 | ಶಾಲಾವಾರು ಖಾಲಿ ಹುದ್ದೆಗಳ ಮತ್ತು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ (ವಿಷಯವಾರು) ಸಂಖ್ಯೆ ಪಟ್ಟಿಯನ್ನು ಆನ್ ಲೈನ್‌ನಲ್ಲಿ ಮತ್ತು ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯ ಪ್ರಕಟಣಾ ಫಲಕದಲ್ಲಿ ಪ್ರಕಟಿಸುವುದು | 30/10/2018 | ಉಪನಿರ್ದೇಶಕರು(ಆಡಳಿತ) |

| | | | |
|---|---|---|---|
| 6 | • ಪ್ರೌಢಶಾಲಾ ಶಿಕ್ಷಕರ ಹೆಚ್ಚುವರಿ ಶಿಕ್ಷಕರ ಕೌನ್ಸಿಲಿಂಗ್ ಪ್ರಕ್ರಿಯೆ-ಆನ್-ಲೈನ್‌ನಲ್ಲಿ ಮೊದಲನೇಯ ಹಂತದಲ್ಲಿ ಜಿಲ್ಲಾ ಮಟ್ಟದಲ್ಲಿ<br>• ಜಿಲ್ಲಾ ಹಂತದಲ್ಲಿ ಶಿಕ್ಷಣ ಸಂಯೋಜಕರ ಕೌನ್ಸಿಲಿಂಗ್ ನಂತರ ನಿಗಧಿತ ಖಾಲಿ ಹುದ್ದೆಗಳು ಲಭ್ಯವಿಲ್ಲದ ಕಾರಣ ಅಂತಹ ಶಿಕ್ಷಣ ಸಂಯೋಜಕರಿಗೆ ವಿಭಾಗಮಟ್ಟದಲ್ಲಿ ಪ್ರಥಮ ಆದ್ಯತೆ ನೀಡಿ ಕೌನ್ಸಿಲಿಂಗ್ ನಡೆಸುವುದು.<br>• ಜಿಲ್ಲಾ ಹಂತದ ಹೆಚ್ಚುವರಿ ನಂತರ ಜಿಲ್ಲೆಯಲ್ಲಿ ಉಳಿಯುವ ಅನಗತ್ಯ ಹೆಚ್ಚುವರಿ ಶಿಕ್ಷಕರನ್ನು ವಿಭಾಗದೊಳಗಿನ ಅಗತ್ಯ ಖಾಲಿ ಹುದ್ದೆಗಳಿಗೆ ಎರಡನೇಯ ಹಂತದಲ್ಲಿ ವಿಭಾಗ ಮಟ್ಟದಲ್ಲಿ | 31/10/2018<br><br>05/11/2018 | ಉಪನಿರ್ದೇಶಕರು(ಆಡಳಿತ)<br>• ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>• ಆಯುಕ್ತಾಲಯದ ಜಂಟಿ ನಿರ್ದೇಶಕರು, ಧಾರವಾಡ/ಗುಲ್ಬರ್ಗಾ |
| 7 | ಕೌನ್ಸಿಲಿಂಗ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಶಿಕ್ಷಕರ ಮಾಹಿತಿಯನ್ನು ಟಿಡಿಎಸ್‌ನಲ್ಲಿ ಅಳವಡಿಸಿ ಕಡ್ಡಾಯ / ಐಚ್ಚಿಕ/ಪರಸ್ಪರ ವರ್ಗಾವಣೆ ಪಟ್ಟಿಯಿಂದ ಅಂತಹ ಶಿಕ್ಷಕರ ಹೆಸರುಗಳನ್ನು ತೆಗೆಯುವ ಕ್ರಮ. ಶಿಕ್ಷಕರ ಪಟ್ಟಿ ಹಾಗೂ ಅಂಕಿ-ಅಂಶ ಸಹಿತ ವರದಿಯನ್ನು ನಿರ್ದೇಶಕರು(ಪ್ರೌಢ ಶಿಕ್ಷಣ) ಇವರಿಗೆ ಸಲ್ಲಿಸುವ ದಿನಾಂಕ. | 07/11/2018 | • ಉಪನಿರ್ದೇಶಕರು(ಆಡಳಿತ)<br>• ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>• ಆಯುಕ್ತಾಲಯದ ಜಂಟಿ ನಿರ್ದೇಶಕರು, ಧಾರವಾಡ/ ಗುಲ್ಬರ್ಗಾ |

## ಕಡ್ಡಾಯ/ಕೋರಿಕೆ/ಪರಸ್ಪರ ವರ್ಗಾವಣೆಗಳ ಪರಿಷ್ಕೃತ ವೇಳಾಪಟ್ಟಿ

| ಕ್ರ.ಸಂ | ವಿವರ | ಪರಿಷ್ಕೃತ ದಿನಾಂಕಗಳು | ಕ್ರಮ ವಹಿಸುವ ಅಧಿಕಾರಿಗಳು |
|---|---|---|---|
| | ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗಳ ಕುರಿತು ಕ್ರಮಗಳು | | |
| 1 | ಕೋರಿಕೆ ವರ್ಗಾವಣೆ ಬಯಸುವ ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರ ವೃಂದದಿಂದ ಅರ್ಜಿಗಳನ್ನು ಕರೆಯಲು ಕ್ರಮ | ಪ್ರಕ್ರಿಯೆ ಮುಗಿದಿದೆ | |
| 2. | ವರ್ಗಾವಣೆ ಕೋರುವ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ವೃಂದ, ಅಂತರ್ಜಾಲದ [on line] ಮೂಲಕ ಅರ್ಜಿ ಸಲ್ಲಿಸಿ ಆನ್-ಲೈನ್ ಸ್ವೀಕೃತಿ ಪಡೆಯಲು ನಿಗದಿಪಡಿಸಿರುವ ಅವಧಿ | ಪ್ರಕ್ರಿಯೆ ಮುಗಿದಿದೆ | |
| 3. | ಆನ್-ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿಯನ್ನು ಪಡೆದು, ಶಿಕ್ಷಕರು ತಮ್ಮ ಸಹಿಯನ್ನು ನಮೂದಿಸಿ ಕ್ಷೇತ್ರಶಿಕ್ಷಣಾಧಿಕಾರಿಯವರಿಗೆ ಸಲ್ಲಿಸಲು ನಿಗಧಿ ಪಡಿಸಿರುವ ಅವಧಿ | ಪ್ರಕ್ರಿಯೆ ಮುಗಿದಿದೆ | |

| | | | |
|---|---|---|---|
| 4 | ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗೆ ಸಂಬಂಧಿಸಿದಂತೆ (ಘಟಕದ ಒಳಗಿನ ಮತ್ತು ಘಟಕದ ಹೊರಗಿನ) ತಾತ್ಕಾಲಿಕ ಆದ್ಯತಾ ಪಟ್ಟಿ ಪ್ರಕಟಣೆ | 22/10/2018 | 1. ಪ್ರೌಢ ಶಿಕ್ಷಣ ನಿರ್ದೇಶಕರು,<br>2. ಅಪರ ಆಯುಕ್ತರ ಕಛೇರಿ, ಧಾರವಾಡ<br>3. ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ<br>4. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>5. ಆಯುಕ್ತಾಲಯದ ಜಂಟಿ ನಿರ್ದೇಶಕರು, ಧಾರವಾಡ/ಗುಲ್ಬರ್ಗಾ<br>6. ಉಪನಿರ್ದೇಶಕರು(ಆಡಳಿತ)<br>7. ಕ್ಷೇತ್ರಶಿಕ್ಷಣಾಧಿಕಾರಿಗಳು |
| 5 | ಕೋರಿಕೆ ಹಾಗೂ ಪರಸ್ಪರ ವರ್ಗಾವಣೆಗಳಿಗೆ ಸಂಬಂಧಿಸಿದ ತಾತ್ಕಾಲಿಕ ಆದ್ಯತಾ ಪಟ್ಟಿಗಳಿಗೆ ಆಕ್ಷೇಪಣೆಗಳನ್ನು (ಘಟಕದ ಹೊರಗೆ ಮತ್ತು ಒಳಗೆ) ಸಲ್ಲಿಸಲು ನಿಗಧಿಪಡಿಸಿರುವ ಅವಧಿ. | 23/10/2018 ರಿಂದ 27/10/2018 | ಸಂಬಂಧಿಸಿದ ಶಿಕ್ಷಕರುಗಳು<br>ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 6 | ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಸೇವಾದಾಖಲೆಗಳೊಂದಿಗೆ ತಾಳೆ ನೋಡಿ ಅಂತರ್ಜಾಲದಲ್ಲಿ [on-line] ಅರ್ಜಿಗಳನ್ನು ಪರಿಶೀಲಿಸಿ, ನ್ಯೂನತೆಗಳಿದ್ದಲ್ಲಿ ಸರಿಪಡಿಸಿ/ ಆಕ್ಷೇಪಣೆಗಳನ್ನು ಪರಿಗಣಿಸಿ ಮಾಹಿತಿಗಳನ್ನು ದೃಢೀಕರಿಸಿ ಅರ್ಜಿಗಳನ್ನು ಆನ್–ಲೈನ್‌ನಲ್ಲಿ ಅನುಮೋದಿಸಲು ನಿಗದಿ ಪಡಿಸಿರುವ ಅವಧಿ | 23/10/2018 ರಿಂದ 27/10/2018 | ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 7 | ವರ್ಗಾವಣೆ ತಂತ್ರಾಂಶದಲ್ಲಿ ಅನುಮೋದಿಸಿ ಪಟ್ಟಿಯನ್ನು ಸಂಬಂಧಿಸಿದ ಉಪನಿರ್ದೇಶಕರಿಗೆ ದೃಢೀಕೃತ ದಾಖಲೆಗಳೊಂದಿಗೆ ಮುದ್ದಾಂ ಸಲ್ಲಿಸಬೇಕಾದ ದಿನಾಂಕ (ತಾತ್ಕಾಲಿಕ ಆದ್ಯತಾ ಪಟ್ಟಿಯಲ್ಲಿರುವ ಶಿಕ್ಷಕರುಗಳ ಅರ್ಜಿಗಳನ್ನು, ಆದ್ಯತಾ ಪಟ್ಟಿಗನುಸಾರ ಅದೇ ಕ್ರಮದಲ್ಲಿ ಮಾತ್ರ ವರ್ಗಾವಣಾ ಪ್ರಾಧಿಕಾರಕ್ಕೆ ಸಲ್ಲಿಸುವುದು.) | 29/10/2018 | 1. ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು<br>2. ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) |
| | **ಕಡ್ಡಾಯ ವರ್ಗಾವಣೆ ಕ್ರಮಗಳು**<br>**(ಕಡ್ಡಾಯ ವರ್ಗಾವಣೆಗಳ ಕುರಿತಂತೆ ಕ್ಷೇತ್ರಶಿಕ್ಷಣಾದಿಕಾರಿಗಳ/ಉಪನಿರ್ದೇಶಕರ ಹಂತದಲ್ಲಿ ಪೂರ್ವಭಾವಿ ಕ್ರಮಗಳು** | | |
| 1 | ಕಡ್ಡಾಯ ವರ್ಗಾವಣೆಗಳು: ನಿಯಮ 21(3) ರನ್ವಯ-ಮೊದಲನೇ ಹಂತದಲ್ಲಿ ಯಾವುದೇ ಜಿಲ್ಲೆಯಲ್ಲಿ ಮಂಜೂರಾದ ವೃಂದಬಲದ ಶೇ 20 ಮತ್ತು ಹೆಚ್ಚಿನ ಖಾಲಿ ಹುದ್ದೆಗಳು ಇರುವ ತಾಲ್ಲೂಕುಗಳಿಗೆ ಶಿಕ್ಷಕರ ಪ್ರಕರಣಗಳಲ್ಲಿ ಕಡ್ಡಾಯ ವರ್ಗಾವಣೆಗಳನ್ನು ಹಮ್ಮಿಕೊಳ್ಳಲು ಪಟ್ಟಿ ಪ್ರಕಟ ಹಾಗೂ ಸ್ಥಳ ನಿಯುಕ್ತಿ. | ಈಗಾಗಲೇ ಪ್ರಕ್ರಿಯೆ ಮುಗಿದಿದೆ | ಜಿಲ್ಲಾ ಉಪನಿರ್ದೇಶಕರು (ಆಡಳಿತ) ಸಹಯೋಗ– ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 2 | • "ಎ"ವಲಯದಲ್ಲಿ 10 ವರ್ಷಕ್ಕಿಂತಲೂ ಹೆಚ್ಚು ಕಾಲ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಪಟ್ಟಿಯನ್ನು, ವರ್ಗಾವಣೆಗೆ ನಿಗದಿಪಡಿಸಿದ ಮಿತಿಗೊಳಪಟ್ಟ ಸಂಖ್ಯೆಯನ್ನು ಗಮನಿಸಿ ಪ್ರಕಟಣಾ | | 1. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>2. ಆಯುಕ್ತಾಲಯದ ಜಂಟಿ ನಿರ್ದೇಶಕರು ಧಾರವಾಡ/ ಗುಲ್ಬರ್ಗಾ |

| | | | |
|---|---|---|---|
| | ಫಲಕದಲ್ಲಿ ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸುವುದು<br>• ಹೆಚ್ಚುವರಿ ಶಿಕ್ಷಕರ ಮರುನಿಯುಕ್ತಿ ಪೂರ್ಣಗೊಳಿಸಿದ ನಂತರ ಮೇಲಿನಂತೆ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಿ ಪಟ್ಟಿಯನ್ನು ಅಂತಿಮಗೊಳಿಸುವುದು. | 05/11/2018 ರಿಂದ 06/11/2018 | (ಉಪನಿರ್ದೇಶಕರು (ಆಡಳಿತ) ಇವರ ಸಹಯೋಗದೊಂದಿಗೆ) |
| 3 | • ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ (ಆನ್-ಲೈನ್)<br>• 'ಎ' ವಲಯದಲ್ಲಿನ ಶಿಸ್ತು ಪ್ರಕರಣಗಳ ಶಿಕ್ಷಕರ ಪಟ್ಟಿಯನ್ನು ಪ್ರಕಟಿಸುವುದು. | 07/11/2018 | 1. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>2. ಆಯುಕ್ತಾಲಯದ ಜಂಟಿ ನಿರ್ದೇಶಕರು ಧಾರವಾಡ/ಗುಲ್ಬರ್ಗಾ ಉಪನಿರ್ದೇಶಕರು (ಆಡಳಿತ) ಇವರ ಸಹಯೋಗದೊಂದಿಗೆ |
| 4 | ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗೆ ಸಂಬಂಧಿಸಿದಂತೆ ಘಟಕದೊಳಗಿನ ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ | 06/11/2018 | 1. ನಿರ್ದೇಶಕರು, ಪ್ರೌಢ ಶಿಕ್ಷಣ<br>2. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>3. ಆಯುಕ್ತಾಲಯದ ಜಂಟಿ ನಿರ್ದೇಶಕರು ಧಾರವಾಡ/ ಗುಲ್ಬರ್ಗಾ<br>4. ಉಪನಿರ್ದೇಶಕರು (ಆಡಳಿತ) |
| 5 | ಘಟಕದ ಒಳಗೆ ಹಾಗೂ ಘಟಕದ ಹೊರಗೆ ಕೋರಿಕೆ / ಪರಸ್ಪರ ವರ್ಗಾವಣೆ ಪ್ರಕರಣಗಳಲ್ಲಿ, ತಾತ್ಕಾಲಿಕ ಆದ್ಯತಾ ಪಟ್ಟಿಯಲ್ಲಿರುವ ಶಿಕ್ಷಕರುಗಳ ಅರ್ಜಿಗಳನ್ನು ಮಾತ್ರ ವರ್ಗಾವಣಾ ಪ್ರಾಧಿಕಾರಕ್ಕೆ ಸಲ್ಲಿಸುವುದು. | ದಿ: 07.11.2018 (ಘಟಕದ ಒಳಗೆ)<br>ಹಾಗೂ<br>ದಿ: 09/11/2018 (ಘಟಕದ ಹೊರಗೆ) | 1. ಜಿಲ್ಲಾ ಉಪನಿರ್ದೇಶಕರು[ಆಡಳಿತ]<br>2. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು<br>3. ಅಪರ ಆಯುಕ್ತಾಲಯದ ಸಹನಿರ್ದೇಶಕರು, ಧಾರವಾಡ/ ಗುಲ್ಬರ್ಗಾ<br>1.ನಿರ್ದೇಶಕರು,( ಪ್ರೌಢ ಶಿಕ್ಷಣ) |
| | **ಕೋರಿಕೆ ವರ್ಗಾವಣೆಗಳು ಮತ್ತು ಪರಸ್ಪರ ವರ್ಗಾವಣೆಗಳ ಮುಂದುವರೆದ ಕ್ರಮಗಳು** | | |
| 6 | ಪರಸ್ಪರ ವರ್ಗಾವಣೆಗಳ (ಘಟಕದ ಒಳಗೆ ') ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ (ಸೂಚನಾ ಫಲಕ/ಇಲಾಖಾ ವೆಬ್‌ಸೈಟ್‌ನಲ್ಲಿ) | 10/11/2018 | 1) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು<br>2)ಸಹನಿರ್ದೇಶಕರು, ಧಾರವಾಡ/ ಗುಲ್ಬಾರ್ಗಾ<br>3)ನಿರ್ದೇಶಕರು, ಪ್ರೌಢ ಶಿಕ್ಷಣ |
| 7 | ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ ಘಟಕದ ಒಳಗೆ ಪ್ರೌಢ ಶಾಲಾ ಶಿಕ್ಷಕರ ಅಂತಿಮ ಆದ್ಯತಾ ಪಟ್ಟಿ (Final list) ಪ್ರಕಟಣೆ (ಆನ್-ಲೈನ್) (ಸೂಚನಾ ಫಲಕ/ಇಲಾಖಾ ವೆಬ್‌ಸೈಟ್‌ನಲ್ಲಿ) | 06/11/2018 | 1) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು<br>2) ಸಹನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಧಾರವಾಡ/ ಗುಲ್ಬಾರ್ಗಾ ಉಪನಿರ್ದೇಶಕರು (ಆಡಳಿತ) ಇವರ ಸಹಯೋಗದೊಂದಿಗೆ |

| | | | |
|---|---|---|---|
| 8 | ಪ್ರೌಢಶಾಲಾ ಶಿಕ್ಷಕರ ವೃಂದದವರಿಗೆ ಘಟಕದೊಳಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | | 1) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು<br>2) ಸಹನಿರ್ದೇಶಕರು,ಅಪರ ಆಯುಕ್ತರ ಕಛೇರಿ, ಧಾರವಾಡ/ ಗುಲ್ಬಾರ್ಗಾ |
| | 'ಬಿ' ವಲಯದ ಶಿಕ್ಷಕರನ್ನು 'ಎ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್<br>'ಸಿ' ವಲಯದ ಶಿಕ್ಷಕರನ್ನು 'ಎ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ (ಖಾಲಿ ಹುದ್ದೆಗಳ ಲಭ್ಯತೆಗೊಳಪಟ್ಟು)<br>'ಸಿ' ವಲಯದ ಶಿಕ್ಷಕರನ್ನು 'ಬಿ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ | 09/11/2018 ರಿಂದ 12/11/2018 | |
| 09 | ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರು/ವಿಶೇಷ ಶಿಕ್ಷಕರ ವೃಂದದವರಿಗೆ ಘಟಕದೊಳಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | | 1) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು<br>2) ಸಹನಿರ್ದೇಶಕರು, ಧಾರವಾಡ/ ಗುಲ್ಬಾರ್ಗಾ |
| | 'ಬಿ' ವಲಯದ ಶಿಕ್ಷಕರನ್ನು 'ಎ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್<br>'ಸಿ' ವಲಯದ ಶಿಕ್ಷಕರನ್ನು 'ಎ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ (ಖಾಲಿ ಹುದ್ದೆಗಳ ಲಭ್ಯತೆಗೊಳಪಟ್ಟು)<br>'ಸಿ' ವಲಯದ ಶಿಕ್ಷಕರನ್ನು 'ಬಿ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ | 13–11–2018 | |
| | **ಕಡ್ಡಾಯ ವರ್ಗಾವಣೆ – ಸೆಕ್ಷನ್ 3ಎ(1)(2) ರಂತೆ** | | |
| 10 | 'ಎ' ವಲಯದ ಶಿಕ್ಷಕರನ್ನು 'ಸಿ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ | 14/11/2018 ರಿಂದ 16/11/2018 | 1)ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>2)ಆಯುಕ್ತಾಲಯದ ಜಂಟಿ ನಿರ್ದೇಶಕರು ಧಾರವಾಡ/ಗುಲ್ಬರ್ಗಾ |
| 11 | 'ಎ' ವಲಯದ ಶಿಕ್ಷಕರನ್ನು 'ಬಿ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ (ಖಾಲಿ ಹುದ್ದೆಗಳ ಲಭ್ಯತೆಗೆ ಒಳಪಟ್ಟು) | | |
| 12 | ಕ್ರಿಮಿನಲ್ / ಶಿಸ್ತು ಪ್ರಕರಣಗಳನ್ನೆದುರಿ ಸುತ್ತಿರುವ ಶಿಕ್ಷಕರ ವರ್ಗಾವಣೆ | 17/11//2018 | 1)ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>2)ಆಯುಕ್ತಾಲಯದ ಜಂಟಿ ನಿರ್ದೇಶಕರು ಧಾರವಾಡ/ಗುಲ್ಬರ್ಗಾ |
| 13 | ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್‌ಗೆ ಪ್ರೌಢಶಾಲಾ ಶಿಕ್ಷಕರ ವೃಂದ (ಘಟಕದ ಒಳಗೆ) | 19.11.2018. | 1)ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ ಮೈಸೂರು/<br>2)ಆಯುಕ್ತಾಲಯದ ಜಂಟಿ ನಿರ್ದೇಶಕರು ಧಾರವಾಡ/ಗುಲ್ಬರ್ಗಾ |
| | **ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗಳು ಮತ್ತು ಪರಸ್ಪರ ವರ್ಗಾವಣೆಗಳ ಮುಂದುವರೆದ ಕ್ರಮಗಳು** | | |
| 14 | ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ (ಘಟಕದ ಹೊರಗೆ) ಅಂತಿಮ ಆದ್ಯತಾ ಪಟ್ಟಿ (Final list) ಪ್ರಕಟಣೆ | 16/11/2018 | ನಿರ್ದೇಶಕರು (ಪ್ರೌಢ ಶಿಕ್ಷಣ) |
| 15 | ಪ್ರೌಢಶಾಲಾ ಶಿಕ್ಷಕರ ವೃಂದದವರಿಗೆ ಘಟಕದ ಹೊರಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | 22.11.2018 ರಿಂದ 27.11.2018 | ನಿರ್ದೇಶಕರು (ಪ್ರೌಢ ಶಿಕ್ಷಣ) |

| | | | |
|---|---|---|---|
| 16 | ಪ್ರೌಢಶಾಲಾ ಸಹಶಿಕ್ಷಕರು/ ದೈಹಿಕ ಶಿಕ್ಷಣ ಶಿಕ್ಷಕರು/ವಿಶೇಷ ಶಿಕ್ಷಕರ ವೃಂದ (ಘಟಕದ ಹೊರಗೆ) | 28.11.2018 | ನಿರ್ದೇಶಕರು (ಪ್ರೌಢ ಶಿಕ್ಷಣ) |
| 17 | ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್‌ಗೆ ಪ್ರೌಢಶಾಲಾ ಶಿಕ್ಷಕರ ವೃಂದ (ಘಟಕದ ಹೊರಗೆ) | 29.11.2018 | ನಿರ್ದೇಶಕರು (ಪ್ರೌಢ ಶಿಕ್ಷಣ) |

ಅಡಕ: ಉಲ್ಲೇಖಿತ ಜ್ಞಾಪನಗಳ ಪ್ರತಿಗಳು

(ಡಾ॥ ಪಿ.ಸಿ.ಜಾಫರ್, ಭಾ.ಆ.ಸೇ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ:-

1. ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಅಪರ ಆಯುಕ್ತರ ಕಛೇರಿ ಕಲ್ಬುರ್ಗಿ/ಧಾರವಾಡ
2. ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ
3. ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ (ಉಪನಿರ್ದೇಶಕರ ಮುಖಾಂತರ)
4. ಹಿರಿಯ ಸಹಾಯಕ ನಿರ್ದೇಶಕರು ಹಾಗು ಸಹಾಯಕ ನಿರ್ದೇಶಕರು,, ಇ-ಗೌರ್ನೆನ್ಸ್, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು-ಪ್ರಸಕ್ತ ವರ್ಗಾವಣೆಗಳಿಗೆ ಈಗಾಗಲೇ ಸಭೆಯಲ್ಲಿ ಸೂಚಿಸಿರುವಂತೆ "ತಂತ್ರಾಂಶವನ್ನು" ಸಜ್ಜುಗೊಳಿಸಿ ಅಗತ್ಯ ತಾಂತ್ರಿಕ ಸಹಕಾರವನ್ನು ಒದಗಿಸಲು ಸಂಬಂಧಿತ ತಂಡವನ್ನು ನಿಯೋಜಿಸಲು ಮತ್ತು ವೇಳಾಪಟ್ಟಿಯಂತೆ ಅಗತ್ಯ ಕ್ರಮ ಕೈಗೊಳ್ಳಲು ಕೋರಿದೆ.
5. ಕಾರ್ಯಕ್ರಮಾಧಿಕಾರಿಗಳು , ಸ್ಯಾಟ್ಸ್ (ಡೈಸ್) ಶಾಖೆ , ಇವರಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ವಂದನಾ ಪೂರ್ವಕವಾಗಿ ಸಲ್ಲಿಸಿದೆ.
2. ಆಪ್ತ ಕಾರ್ಯದರ್ಶಿಯವರು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಸಹ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
6. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ/ಧಾರವಾಡ
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
10. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ
11. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ
12. ಇಲಾಖಾ ವೆಬ್-ಸೈಟ್ನಲ್ಲಿ ರಾಜ್ಯದ ಎಲ್ಲಾ ಶಿಕ್ಷಕರ ಮತ್ತು ಇತರೆ ಸಾರ್ವಜನಿಕರ ಮಾಹಿತಿಗೆ ಪ್ರಕಟಣೆಗೆ
13. ಕಛೇರಿ ಪ್ರತಿ.